ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 11ನೇ ಡಿಸೆಂಬರ್, 2018
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎರಡನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ / ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಮತ್ತು ಎರಡನೇ ಪಟ್ಟಿ ರೀತ್ಯಾ.

... 2/ ..

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಗೋವಿಂದ.ಎಂ.ಕಾರಜೋಳ, ಎಂ.ಪಿ.ರೇಣುಕಾಚಾರ್ಯ ಮತ್ತು ಕಳಕಪ್ಪ ಗುರುಶಾಂತಪ್ಪ ಬಂಡಿ ಇವರುಗಳು** – ಬಾಗಲಕೋಟೆ ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ ತಾಲ್ಲೂಕುಗಳಲ್ಲಿನ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಸಂಬಂಧ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್.ಲಿಂಗೇಶ್ ಮತ್ತು ಸಿ.ಎನ್.ಬಾಲಕೃಷ್ಣ ಇವರುಗಳು** – ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸಕಲೇಶಪುರ, ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳಲ್ಲಿನ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿದ್ದು ಯೋಜನೆಯನ್ನು ತ್ವರಿತಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡನಗೌಡರ ಮಹಾಂತೇಶ ಬಸವಂತರಾಯ್ ಅವರು** – ಕಿತ್ತೂರನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಿ, ಸುಮಾರು 7 ವರ್ಷ ಕಳೆದರೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದೇ ಇರುವುದರಿಂದ ಅಲ್ಲಿನ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಮತಿ ಕೆ.ಪೂರ್ಣಿಮಾ ಮತ್ತು ಶ್ರೀ ಜೆ.ಸಿ.ಮಾಧುಸ್ವಾಮಿ ಅವರು** – ತೆಂಗಿನ ಬೆಳೆಯು ಮಳೆಯ ಅಭಾವದಿಂದ / ವಿವಿಧ ರೋಗಗಳಿಂದ ನಾಶವಾಗುತ್ತಿದ್ದು, ಒಂದು ಗಿಡಕ್ಕೆ ರೂ.400/– ರಂತೆ ಪರಿಹಾರ ಮೊತ್ತ ನೀಡಲು ಪ್ರಸ್ತಾಪವಿದ್ದು, ಸದರಿ ಪರಿಹಾರ ಮೊತ್ತವು ಅವೈಜ್ಞಾನಿಕವಾಗಿರುವುದರಿಂದ ಅದನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

3) **ಶ್ರೀಮತಿ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಅವರು** – ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲಗಾ, ಕೊಂಡಸಕೊಪ್ಪ, ಬಸ್ತವಾಡ, ಕಮಕಾರಕಟ್ಟಿ ಹಾಗೂ ರಕ್ಕಸಕೊಪ್ಪ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

... 3/ ..

4) **ಶ್ರೀ ಸಿ.ಟಿ.ರವಿ ಹಾಗೂ ಶ್ರೀ ಬೆಳ್ಳಿಪ್ರಕಾಶ್ ಇವರುಗಳು** – ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯು ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದು ಹಾಗೂ ಆ ಯೋಜನೆಯಲ್ಲಿನ ಮಾರ್ಗಸೂಚಿಯಲ್ಲಿ ಕೆಲವೊಂದು ಬದಲಾವಣೆ ತರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm